ಶ್ರೀ ಬಿ.ಎಸ್.ಯಡಿಯೂರಪ್ಪ (ಮುಖ್ಯಮಂತ್ರಿಯವರು) :

ಅ) ಕೇಂದ್ರ ಸರ್ಕಾರವು ಚನ್ನೈ ಉಚ್ಚ ನ್ಯಾಯಾಲಯದ ರಿಟ್ ಅರ್ಜಿಯಲ್ಲಿನ ಅಂತಿಮ ತೀರ್ಮಾನಕ್ಕೆ ಒಳಪಟ್ಟು ಕನ್ನಡಕ್ಕೆ ಶಾಸ್ತ್ರೀಯ ಸ್ಥಾನಮಾನವನ್ನು ನೀಡಿರುವುದರಿಂದ ಯಾವುದೇ ಅನುದಾನವು ಬಂದಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಈ) ಉದ್ಭವಿಸುವುದಿಲ್ಲ.

746 ಶ್ರೀ ಕೃಷ್ಣಮೂರ್ತಿ ಕೆ.ಎಂ. (ಕಡೂರು) : ಮಾನ್ಯ ಗೃಹ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಈ ಸಾಲಿನಲ್ಲಿ ನೂತನವಾಗಿ ಪೊಲೀಸ್ ಠಾಣೆಗಳನ್ನು ಪ್ರಾರಂಭಿಸಲಾಗುವುದೇ?

ಆ) ಹಾಗಿದ್ದಲ್ಲಿ, ಎಷ್ಟು ಠಾಣೆಗಳನ್ನು ಎಲ್ಲೆಲ್ಲಿ ಪ್ರಾರಂಭಿಸಲಾಗುವುದು?

ಇ) ಕಡೂರು ತಾಲ್ಲೂಕಿನ ಹಿರೇನಲ್ಲೂರು ಎಮ್ಮೆದೊಡ್ಡಿ ಭಾಗಕ್ಕೆ ನೂತನ ಪೊಲೀಸ್‌ಠಾಣೆ ಆರಂಭಿಸಲು ಸರ್ಕಾರ ಕ್ರಮಕೈಗೊಂಡಿದೆಯೇ?

ಶ್ರೀ ಡಾ: ವಿ.ಎಸ್.ಆಚಾರ್ಯ (ಗೃಹ ಸಚಿವರು) :

ಅ) ಆ) ಮತ್ತು ಇ)

2009ನೇ ಸಾಲಿನಲ್ಲಿ ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು ರಾಜ್ಯದ ವಿವಿಧ ಸ್ಥಳಗಲ್ಲಿ ಪೊಲೀಸ್ ಠಾಣೆಗಳನ್ನು ಮಂಜೂರು ಮಾಡಲು ಕಳುಹಿಸಿರುವ ಕ್ರೋಢೀಕೃತ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ. ಹಣಕಾಸಿನ ಲಭ್ಯತೆಗೆ ಅನುಗುಣವಾಗಿ ಕ್ರೋಢೀಕೃತ ಪ್ರಸ್ತಾವನೆಯನ್ನು ಪರಿಗಣಿಸಲಾಗುವುದು.

Consolidated proposal sent by the DG & IGP for sanctioning new police stations at various places in the State during 2009 is under examination by Government. Consolidated proposal will be considered depending on the availability funds.

ಕಡೂರು ತಾಲ್ಲೂಕಿನ ಹಿರೇನಲ್ಲೂರು ಗ್ರಾಮದಲ್ಲಿ ಪೊಲೀಸ್ ಠಾಣೆ ತೆರೆಯುವ ಪ್ರಸ್ತಾವನೆಯು ಇಲಾಖೆಯ ಪರಿಶೀಲನೆಯಲ್ಲಿದೆ. ಎಮ್ಮೆದೊಡ್ಡಿ ಗ್ರಾಮದಲ್ಲಿ ಪೊಲೀಸ್ ಠಾಣೆ ತೆರೆಯುವ ಪ್ರಸ್ತಾವನೆಯು ಸರ್ಕಾರಕ್ಕೆ ಬಂದಿರುವುದಿಲ್ಲ.

Proposal to open a Police Station at Hirenallur village, Kadur Taluk is under examination at the Department.

Proposal for opening of Police Station at Yemmedoddi has not come to Government.

456 ಶ್ರೀ ಕುಲಕರ್ಣಿ ಶ್ರೀಕಾಂತ್ ಸುಬ್ಬರಾವ್ (ಜಮಖಂಡಿ) : ಮಾನ್ಯ ಗೃಹ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಉಪವಿಭಾಗ ಕೇಂದ್ರವಾದ ಜಮಖಂಡಿಯಲ್ಲಿ ಜಿಲ್ಲಾ ಸಶಸ್ತ್ರ ಮೀಸಲು ಪಡೆ ಉಪ ಕಛೇರಿ ಪ್ರಾರಂಭಿಸಲು ಪ್ರಸ್ತಾವನೆ ಸರ್ಕಾರದ ಮುಂದಿದೆಯೇ? ಹಾಗಿದ್ದಲ್ಲಿ, ಯಾವ ಕ್ರಮ ಕೈಗೊಳ್ಳಲಾಗಿದೆ;

ಆ) ಹಾಗಿದ್ದಲ್ಲಿ ಜಿಲ್ಲಾ ಸಶಸ್ತ್ರ ಮೀಸಲು ಪಡೆ ಉಪ ಕಛೇರಿಯನ್ನು ಯಾವಾಗ ಪ್ರಾರಂಭಿಸಲಾಗುವುದು;

ಇ) ಜಮಖಂಡಿ ನಗರದಲ್ಲಿ ಸಂಚಾರ ನಿಯಂತ್ರಣಕ್ಕಾಗಿ ಸಂಚಾರಿ ಪೊಲೀಸ್ ಠಾಣೆ ಅವಶ್ಯಕತೆ ಇದೆ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಈ) ಹಾಗಿದ್ದಲ್ಲಿ ಎಂದಿನಿಂದ ಮಂಜೂರಾತಿ ನೀಡಲಾಗುವುದು?

ಶ್ರೀ ಡಾ: ವಿ.ಎಸ್.ಆಚಾರ್ಯ (ಗೃಹ ಸಚಿವರು) :

ಅ) ಇಲ್ಲ. ಬಾಗಲಕೋಟೆ ಜಿಲ್ಲೆಯಲ್ಲಿ ಈಗಾಗಲೇ ಜಿಲ್ಲಾ ಸಶಸ್ತ್ರ ಮೀಸಲು ಪಡೆಯಿದ್ದು, ಉಪವಿಭಾಗ ಕೇಂದ್ರವಾದ ಜಮಖಂಡಿಯಲ್ಲಿ ಜಿಲ್ಲಾ ಸಶಸ್ತ್ರ ಮೀಸಲು ಪಡೆಯ ಉಪ ಕಛೇರಿ ಪ್ರಾರಂಭಿಸುವ ಪ್ರಸ್ತಾವನೆಯಿಂದ ಸರ್ಕಾರಕ್ಕೆ ಅನಾವಶ್ಯಕವಾಗಿ ಅರ್ಥಿಕ ಹೊರೆಯಾಗಲಿರುವುದರಿಂದ ಇಲ್ಲಿ, ಜಿಲ್ಲಾ ಸಶಸ್ತ್ರ ಮೀಸಲು ಪಡೆಯ ಉಪ ಕಛೇರಿ ಪ್ರಾರಂಭಿಸುವ ಅವಶ್ಯಕತೆ ಇರುವುದಿಲ್ಲ.

No. As there is already District Armed Reserve Police Headquarters at Bagalkot District and since establishment of DAR Sub-office at Jamkhandi Sub-Division, involves unnecessary financial burden to the Government, There is no need to open a DAR Sub-office.

ಆ) ಉದ್ಭವಿಸುವುದಿಲ್ಲ.

Does not arise.

ಇ) ಮತ್ತು ಈ)